# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/34/2020–21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ–ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ:18–09–2021

## ದಿನಾಂಕ; 18–09–2021 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;–

- ಶ್ರೀ. ವಿಶ್ವನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆ.ಸಿ ನಗರ ಉಪ–ವಿಭಾಗ
- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಗಂಗಾಧರ, ಬೆಸ್ಕಾಂ ಇಲಾಖೆ
- ಶ್ರೀ. ಜಿ. ಸ್ವಾಮಿ, ಬಿಡ್ಬ್ಯೂ.ಎಸ್.ಎಸ್.ಬಿ ಪರಿವೀಕ್ಷಕರು
- ಶ್ರೀ. ಕೆಂಜಣ್ಣ, ಬಿಡ್ಬ್ಯೂ.ಎಸ್.ಎಸ್.ಬಿ ಸದಸ್ಯರು
- ಶ್ರೀ. ಉದಯ್ ಚಂದನ್, ಕೆ.ಆರ್,ಡ್ಬ್ಯೂಎ ಸದಸ್ಯರು
- ಶ್ರೀ. ಚಂದ್ ಪಾಷ, ಕೆ.ಆರ್,ಡ್ಬ್ಯೂಎ ಸದಸ್ಯರು
- ಶ್ರೀಮತಿ. ಪ್ರೇಮಕುಮಾರಿ, ನಾಗರೀಕರು
- ಶ್ರೀ. ಬೆನ್ನಿ ಸಬಾಸ್ಟಿನ್, ನಾಗರೀಕರು
- ಶ್ರೀ. ರುಸ್ಕಿ, ಸನ್ ರೈಸ್ ಕಾಲೋನಿ ನಾಗರೀಕರು
- ಶ್ರೀ. ಕಾರ್ತಿಕ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ; 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 23–07–2021 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, 17ನೇ ಮತ್ತು 18ನೇ ಕನಕನಗರದ ಅಡ್ಡರಸ್ತೆಯನ್ನು ಮರು ಡಾಂಬರೀಕರಣ ಮಾಡಿರುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 +ve ಕೇಸ್‌ಗಳು ಹೆಚ್ಚಾಗುತ್ತಿದ್ದು, ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಕ್ಷಿನೇಶನ್ ಅನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಕ್ಷಿನೇಶನ್ ನೀಡುತ್ತಿರುವ ಬಗ್ಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ಘನತ್ಯಾಜ್ಯ ಇಲಾಖೆಯವರಿಂದ ಕಸ ವಿಲೇವಾರಿ ಮಾಡುವ ಬಗ್ಗೆ ಹಾಗೂ ಅಲ್ಲಲ್ಲಿ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸ ವಿಂಗಡಣೆ ಮಾಡಿ ಸರಿಯಾದ ರೀತಿಯಲ್ಲಿ ಕಸ ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ಆರೋಗ್ಯ ಇಲಾಖೆ ಕಡೆಯಿಂದ ವಾರ್ಡಿನಲ್ಲಿರುವ ಹೋಟೆಲ್‌ಗಳಲ್ಲಿ ಕೆಲಸ ಮಾಡುವ ಜನರಿಗೆ ವ್ಯಾಕ್ಷಿನೇಶನ್‌ಗಳನ್ನು ಪೂರೈಕೆ ಮಾಡುತ್ತೀರುವ ಬಗ್ಗೆ ತಿಳಿಸಿದರು ಹಾಗೂ ವಾರ್ಡಿನಲ್ಲಿ ಕಸ ವಿಲೇವಾರಿ ಸರಿಯಾಗಿ ಆಗುತ್ತಿದ್ದು ಯಾವುದೇ ಸಮಸ್ಯೆ ಇಲ್ಲವೆಂದು ತಿಳಿಸಿದರು.
- ಸಭೆಗೆ ಹಾಜರಿದ್ದ ಶ್ರೀ ಮಧು ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ಇವರಿಗೆ ಕಸ ವಿಂಗಡಣೆ ಮತ್ತು ವಾರ್ಡಿನಲ್ಲಿ ಸ್ವಚ್ಛತೆಯನ್ನು ಕಾಪಾಡುವ ಬಗ್ಗೆ ತಿಳಿಸಿದರು.
- ಶ್ರೀ ಕಾರ್ತಿಕ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಸಿ.ಐ.ಎಲ್ ಬಡಾವಣೆ ಮತ್ತು ಸನ್ ರೈಸ್ ಕಾಲೋನಿಯ ಅಡ್ಡ ಹಾಗೂ ಮುಖ್ಯರಸ್ತೆಗಳಲ್ಲಿ ಚರಂಡಿ ಸ್ವಚ್ಛ ಮಾಡುವಂತೆ ತಿಳಿಸಿದರು. ಹಾಗೂ Garbage pointನ ಹತ್ತಿರ ದಿನಾಲೂ ಸ್ವಚ್ಛತೆ ಮಾಡುವ ಬಗ್ಗೆ ಚರ್ಚಿಸಲಾಯಿತು.
- ಶ್ರೀ ಚಂದ್ ಪಾಷ, ಕೆ.ಆರ್,ಡ್ಬ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 9ನೇ ಕ್ರಾಸ್, 20ನೇ ಕ್ರಾಸ್ ಮತ್ತು 21ನೇ ಕ್ರಾಸ್ ಕನಕನಗರದ ರಸ್ತೆಗಳಲ್ಲಿ ಜಲ್ಲಿಗಳಿಂದ ಗುಂಡಿಗಳನ್ನು ತುಂಬಿ ಹಾಗೂ ರಸ್ತೆಯನ್ನು ಮರು ಡಾಂಬರೀಕರಣ ಮಾಡುವಂತೆ ತಿಳಿಸಿದರು.

- ಶ್ರೀ. ಉದಯ್ ಚಂದನ್, ಕೆ.ಆರ್,ಡ್ಬ್ಲ್ಯೂಎ ಸದಸ್ಯರು ಮಾತನಾಡುತ್ತಾ, 8ನೇ ಕ್ರಾಸ್ ಮತ್ತು ಕನಕನಗರದ ಕೆಲವು ಅಡ್ಡರಸ್ತೆಗಳು ತೀರಾ ಹಾಳಾಗಿದ್ದು, ರಸ್ತೆಯನ್ನು ದುರಸ್ಥಿ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀ. ಬೆನ್ನಿ ಸಬಾಸ್ಟಿನ್, ನಾಗರೀಕರು ಮಾತನಾಡುತ್ತಾ, 10ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ ಕೇಬಲ್ ಸಂಪರ್ಕಕ್ಕೆ ರಸ್ತೆಯನ್ನು ಅಗೆಯುತ್ತಿದ್ದು, ಕೂಡಲೇ ಕಾಮಗಾರಿಯನ್ನು ಸ್ಥಗಿತಗೊಳಿಸಲು ತಿಳಿಸಿದರು.
- ಶ್ರೀಮತಿ. ಪ್ರೇಮಕುಮಾರಿ, ನಾಗರೀಕರು ಮಾತನಾಡುತ್ತಾ, 20ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ Eletric wire ರಸ್ತೆಯಲ್ಲಿ ಹಾದುಹೋಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ ಕೂಡಲೇ ಬೆಸ್ಕಾಂ ಇಲಾಖೆ ತಿಳಿಸಿ ಅದನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಿ. ನಾಗೇನಹಳ್ಳಿ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಗುಂಡಿಗಳು ಬಿದ್ದಿರುವುದರಿಂದ ತಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದು ಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಿದರು.
- BWSSB ಇಲಾಖೆ, Bescom ಇಲಾಖೆ ಮತ್ತು Traffic ಪೋಲೀಸ್ ಇಲಾಖೆಯವರು ಮುಂದಿನ ಸಭೆಯಲ್ಲಿ ತಪ್ಪದೇ ಕಡ್ಡಾಯವಾಗಿ ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ನೋಟೀಸ್ ಅನ್ನು ನೀಡುವಂತೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೆಲವು ಅಡ್ಡರಸ್ತೆ ಹಾಗೂ ಮುಖ್ಯರಸ್ತೆಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುವ ಬಗ್ಗೆ ತಿಳಿಸಿದರು. ಅದರಂತೆ ಕಾಮಗಾರಿ ಈಗಾಗಲೇ ಮುಗಿದಿರುತ್ತದೆ.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಕೋವಿಡ್ ವ್ಯಾಕ್ಸಿನೇಶನ್‌ಗಳನ್ನು ಜನರಿಗೆ ಅನುಕೂಲವಾಗುವಂತೆ ಹೆಚ್ಚಿನ ರೀತಿಯಲ್ಲಿ ವ್ಯಾಕ್ಸಿನೇಶನ್‌ಗಳನ್ನು ಹಾಕಲಾಗುತ್ತಿದ್ದು, ಕೋವಿಡ್‌ಶೀಲ್ಡ್ ಹಾಗೂ ಕೋವಿಡ್ ಕೋವ್ಯಾಕ್ಸಿನ್ ಅನ್ನು ಸಹ ಪ್ರತಿದಿನ ವಾರ್ಡಿನಲ್ಲಿ ನೀಡುತ್ತಿರುವುದನ್ನು ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲ ಮುಖ್ಯರಸ್ಯೆ ಮತ್ತು ಅಡ್ಡರಸ್ತೆಗಳಿಗೆ ಕಡ್ಡಾಯವಾಗಿ ಸ್ಯಾನಿಟೈಸರ್ ಮಾಡಲಾಗುತ್ತಿದೆ ಎಂದು ತಿಳಿಸಿದರು.
- ವಾರ್ಡ್ ನ ವ್ಯಾಪಿಯಲ್ಲಿ ಬರುವ ಮುಖ್ಯರಸ್ತೆಯ ಬದಿಯಲ್ಲಿ ಫುಟ್ ಪಾತ್ ಮೇಲೆ ಯಾವುದೇ ಮಳಿಗೆ ಹಾಗೂ ಅನಧಿಕೃವಾಗಿ ಹೆಚ್ಚುವರಿ ವಸ್ತುಗಳನ್ನು ಇಟ್ಟರೆ ಕೂಡಲೇ ಅವರ ಮೇಲೆ ಕ್ರಮಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀ ಕಾರ್ತಿಕ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಸನ್ ರೈಸ್ ರಸ್ತೆಗಳಲ್ಲಿ ಸುಮಾರು 10–15 ನಾಯಿಗಳಿದ್ದು, ಪಶು ಸಂಗೋಪನೆ ಇಲಾಖೆ ಶೀಘ್ರವಾಗಿ ನಾಯಿಗಳಿಗೆ ಚುಚುಮದ್ದು ನೀಡುವಂತೆ ಪತ್ರ ಬರೆಯಲು ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ

ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12;45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22